**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 06–08–2021**

# ಮಾಧ್ಯಮ ಆಹ್ವಾನ
# Media Invitation

ಬೆಂಗಳೂರು, ಆಗಸ್ಟ್ 06 ( ಕರ್ನಾಟಕ ವಾರ್ತೆ ) :

ಆರ್ಯ ವೈಶ್ಯ ಸಮುದಾಯದ ಅಭಿವೃದ್ಧಿ ನಿಗಮದ ಯೋಜನಗೆಳಿಗೆ ಮಂಜೂರು ಮಾಡಲಾದ ಸಾಲದ ಮೊತ್ತ ಮರುಪಾವತಿ ಪಡೆಯುವ ಸಂಬಂಧ ಮೊಬೈಲ್ ಆಪ್ ಹಾಗೂ ವಿವಿಧ ಯೋಜನೆಗಳ ಅನುಷ್ಠಾನ ಕುರಿತು ಪತ್ರಿಕಾ ಗೋಷ್ಠಿ.

ಆರ್ಯ ವೈಶ್ಯ ಸಮುದಾಯದ ಅಭಿವೃದ್ಧಿ ನಿಗಮ ಅಧ್ಯಕ್ಷರಿಂದ

ದಿನಾಂಕ: **07–08–2021ರ ಶನಿವಾರ** ಸಮಯ: **ಬೆಳಿಗ್ಗೆ 11.30 ಗಂಟೆಗೆ**
ಸ್ಥಳ: **ಪ್ರೆಸ್ ಕ್ಲಬ್,** ಕಬ್ಬನ್ ಉದ್ಯಾನವನ, ಬೆಂಗಳೂರು.

# ಪತ್ರಿಕಾ ಪ್ರಕಟಣೆ
## PRESS RELEASE

## ಮಾನವೀಯ ಮೌಲ್ಯಗಳನ್ನು ಕಾನೂನಿನ ಚೌಕಟ್ಟಿಗೆ ಅಳವಡಿಸುವುದು ಅಗತ್ಯ: ಮುಖ್ಯಮಂತ್ರಿ ಬಸವರಾಜ ಎಸ್. ಬೊಮ್ಮಾಯಿ

ಬೆಂಗಳೂರು, ಆಗಸ್ಟ್ 06 ( ಕರ್ನಾಟಕ ವಾರ್ತೆ ) :

ಮಾನವೀಯ ಮೌಲ್ಯಗಳನ್ನು ಕಾನೂನಿನ ಚೌಕಟ್ಟಿನಲ್ಲಿ ಅಳವಡಿಸುವುದರಿಂದ ಹಲವು ಸಮಸ್ಯೆಗಳಿಗೆ ಪರಿಹಾರ ದೊರೆಯುವುದಲ್ಲದೆ, ನ್ಯಾಯಾಂಗ ಇನ್ನಷ್ಟು ಮಾನವೀಯ ಹಾಗೂ ಜನಸ್ನೇಹಿಯಾಗಲು ಸಾಧ್ಯ ಎಂದು ಮುಖ್ಯಮಂತ್ರಿ ಬಸವರಾಜ ಎಸ್. ಬೊಮ್ಮಾಯಿ ಅವರು ಅಭಿಪ್ರಾಯಪಟ್ಟರು.

ಅವರು ಇಂದು ಹುಬ್ಬಳ್ಳಿ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದ ವಿಜ್ಞಾನೇಶ್ವರ ಅಧ್ಯಯನ ಪೀಠವು ಏರ್ಪಡಿಸಿದ್ದ "ಕರ್ನಾಟಕದಲ್ಲಿ ಮಿತಾಕ್ಷರ, ವಚನ ದಾಸ ಮತ್ತು ಜಾನಪದ ಸಾಹಿತ್ಯದಲ್ಲಿ ಕಾನೂನಿನ ಸಮಾಜಮುಖಿ ಮೌಲ್ಯಗಳು - ಒಂದು ಪರಿಶೋಧನೆ" ಎಂಬ ವಿಷಯದ ಕುರಿತ ವೆಬಿನಾರ್ ಅನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕದ ವಚನ, ದಾಸ ಸಾಹಿತ್ಯ ಹಾಗೂ ಜಾನಪದ ಸಾಹಿತ್ಯಗಳು ಸಮಾನತೆ, ಸಹಿಷ್ಣುತೆ, ಧನ್ಯತೆ, ಕ್ಷಮಾಗುಣ ಮೊದಲಾದ ಭಾವಗಳನ್ನು ಸಮರ್ಥವಾಗಿ ಅಭಿವ್ಯಕ್ತಪಡಿಸಿವೆ, ಈ ಮೌಲ್ಯಗಳನ್ನು ಕಾನೂನಿನ ಚೌಕಟ್ಟಿನಲ್ಲಿ ಅಳವಡಿಸುವ ನಿಟ್ಟಿನಲ್ಲಿ ವಿಜ್ಞಾನೇಶ್ವರ ಅಧ್ಯಯನ ಪೀಠ ಕಾರ್ಯನಿರ್ವಹಿಸಬೇಕಾಗಿದೆ ಎಂದು ತಿಳಿಸಿದರು.

ಸಮಾಜದಲ್ಲಿನ ಬದಲಾವಣೆಗಳೊಂದಿಗೆ ಕಾನೂನಿನಲ್ಲಿಯೂ ಪರಿವರ್ತನೆಗಳಾಗಿವೆ. ಇಂದಿನ ದಿನಗಳಲ್ಲಿ ಸಾಮಾಜಿಕ ಸ್ಥಿತಿಗತಿಗಳಲ್ಲಿ, ವ್ಯಕ್ತಿ-ವ್ಯಕ್ತಿಯ ಸಂಬಂಧದಲ್ಲಿ, ಸಮಾಜ- ಸಮಾಜದ ಸಂಬಂಧದಲ್ಲಿ ಅಗಾಧ ಬದಲಾವಣೆಗಳಾಗುತ್ತಿದೆ. ಅಂತೆಯೇ ಕಾನೂನಿನ ಕುರಿತ ಜನತೆಯ ಚಿಂತನೆಯಲ್ಲಿಯೂ ಬದಲಾವಣೆಗಳಾಗುತ್ತಿದೆ. ಈ ಅಂಶಗಳ ಕುರಿತು ಅಧ್ಯಯನ ಪೀಠ ಅಧ್ಯಯನ ನಡೆಸಬೇಕು ಎಂದು ಆಶಿಸಿದರು.

ಕರ್ನಾಟಕದ ಸಾಹಿತ್ಯ ಕ್ಷೇತ್ರದ ಕ್ರಾಂತಿ ಗಮನಾರ್ಹವಾದುದು. ನಮ್ಮ ದೇಶದ ಕಾನೂನಿಗೆ ಆಧಾರವಾದ ಸಂವಿಧಾನದ ಆಶಯಗಳು ಬಸವಣ್ಣನವರ ಚಿಂತನೆಗಳನ್ನೇ ಬಿಂಬಿಸುತ್ತದೆ ಎಂದು ಮುಖ್ಯಮಂತ್ರಿಗಳು ಅಭಿಪ್ರಾಯಪಟ್ಟರು. ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ಅವರು ಆಸಕ್ತಿ ವಹಿಸಿ ಸ್ಥಾಪಿಸಿದ ಈ ಅಧ್ಯಯನ ಪೀಠವು ರಾಷ್ಟ್ರೀಯ, ಅಂತರರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆಯುವಂತಾಗಲಿ ಎಂದು ನುಡಿದರು.

ಸಮಾರಂಭದಲ್ಲಿ ವಿಜ್ಞಾನೇಶ್ವರ ಅಧ್ಯಯನ ಪೀಠದ ಅಧ್ಯಕ್ಷ, ಸರ್ವೋಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ನ್ಯಾ. ಶಿವರಾಜಪಾಟೀಲ, ಸುಪ್ರೀಂ ಕೋರ್ಟಿನ ನಿವೃತ್ತ ನ್ಯಾಯಾಧೀಶ ನ್ಯಾ. ಬಿ.ಎನ್. ಶ್ರೀಕೃಷ್ಣ, ಕರ್ನಾಟಕ ಕಾನೂನು ವಿವಿ ಕುಲಪತಿ ಪ್ರೊ. ಈಶ್ವರ ಭಟ್, ಸಚಿವರಾದ ವಿ.ಸೋಮಣ್ಣ, ಡಾ. ಸುಧಾಕರ್, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎನ್. ಮಂಜುನಾಥ ಪ್ರಸಾದ್, ಮುಖ್ಯಮಂತ್ರಿಯವರ ಕಾರ್ಯದರ್ಶಿ ಗಿರೀಶ್ ಹೊಸೂರು ಸೇರಿದಂತೆ ಗಣ್ಯರು ಭಾಗವಹಿಸಿದ್ದರು.

## ಮುಖ್ಯ ಸಚೇತಕರ ಸ್ಥಾನಕ್ಕೆ ರಾಜಿನಾಮೆ

ಬೆಂಗಳೂರು, ಆಗಸ್ಟ್ 06 ( ಕರ್ನಾಟಕ ವಾರ್ತೆ ) :

ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಮುಖ್ಯ ಸಚೇತಕರಾದ ವಿ. ಸುನೀಲ್ ಕುಮಾರ್ ಅವರು ದಿನಾಂಕ: 04ನೇ ಆಗಸ್ಟ್ 2021ರಂದು ಕರ್ನಾಟಕ ವಿಧಾನಸಭೆಯ ಸರ್ಕಾರಿ ಮುಖ್ಯ ಸಚೇತಕರ ಸ್ಥಾನಕ್ಕೆ ರಾಜಿನಾಮೆ ನೀಡಿದ್ದಾರೆ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೌರವಧನ ಆಧಾರ ಮೇಲೆ ಸಂಯೋಜಕರ ನೇಮಕಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 06 ( ಕರ್ನಾಟಕ ವಾರ್ತೆ ) :

ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಡಿ ಅನುಷ್ಠಾನಗೊಳ್ಳುತ್ತಿರುವ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಮೂರು ಜಿಲ್ಲೆಗಳಿಗೆ ಒಬ್ಬರಂತೆ ಬಾಕಿ ಉಳಿದಿರುವ ಕೇಂದ್ರಸ್ಥಾನಗಳಾದ ಬೆಂಗಳೂರು ನಗರ, ಶಿವಮೊಗ್ಗ, ದಾವಣಗೆರೆ, ಕಲಬುರಗಿ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ಜಿಲ್ಲಾ ಮಟ್ಟದ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ತಾತ್ಕಾಲಿಕವಾಗಿ ಭರ್ತಿ ಮಾಡಿಕೊಳ್ಳಲು ಸ್ಥಳೀಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಸಲ್ಲಿಸ ಬಯಸುವವರು 21 ವರ್ಷದಿಂದ 45 ವರ್ಷದೊಳಗಿರಬೇಕು, ಕನಿಷ್ಠ ಎಂಎಸ್.ಡಬ್ಲ್ಯು ಮತ್ತು ಕಂಪ್ಯೂಟರ್‌ನಲ್ಲಿ 6 ತಿಂಗಳ ಕೋರ್ಸ್ ಪಡೆದಿರುವ ಪ್ರಮಾಣ ಪತ್ರ ಹೊಂದಿರಬೇಕು. ವಿಕಲಚೇತನರ ಸಬಲೀಕರಣ

ಕ್ಷೇತ್ರದಲ್ಲಿ ಸರ್ಕಾರದ ಯೋಜನೆಗಳ ಅನುಷ್ಠಾನದ ಬಗ್ಗೆ ಕನಿಷ್ಠ 01 ವರ್ಷ ಅನುಭವ ಹೊಂದಿರಬೇಕು. ನೇಮಕವಾದ ಅಭ್ಯರ್ಥಿಗಳಿಗೆ ಮಾಸಿಕ 13,000/- (ಪ್ರಾಸಂಗಿಕ ಮತ್ತು ಪ್ರವಾಸ ಭತ್ಯೆ ಸೇರಿ) ಗೌರವಧನ ನೀಡಲಾಗುವುದು.

ಅರ್ಜಿ ನಮೂನೆಗಳನ್ನು ವೆಬ್‌ಸೈಟ್ www.dwdsc.kar.nic.in ನಲ್ಲಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 19-08-2021ರೊಳಗೆ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶನಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಪೋಡಿಯಂ ಬ್ಲಾಕ್, ವಿ.ವಿ.ಗೋಪುರ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂ. 080-22860907 ಮೂಲಕ ಸಂಪರ್ಕಿಸಬಹುದು ಎಂದು ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 06 ( ಕರ್ನಾಟಕ ವಾರ್ತೆ ) :

ಸಚಿವರಾದ ವಿ.ಸೋಮಣ್ಣ ಅವರು ಆಗಸ್ಟ್ 7, ಮತ್ತು 8, 2021 ರಂದು ಎರಡು ದಿನ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ
## ನೂತನ ಬಿ.ಎಸ್ಸಿ (ಹಾನರ್ಸ್) ಪದವಿ ಕೋರ್ಸ್ ಆರಂಭ

**ಬೆಂಗಳೂರು, ಆಗಸ್ಟ್ 06 (ಕರ್ನಾಟಕ ವಾರ್ತೆ)**

ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ನೂತನ ಶಿಕ್ಷಣ ನೀತಿ-2020 ರನ್ವಯ 2021-22 ನೇ ಸಾಲಿಗೆ ಎರಡು ಹೊಸ ಬಿ.ಎಸ್ಸಿ (ಹಾನರ್ಸ್) ಕೋರ್ಸ್‌ಗಳನ್ನು ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ಆರಂಭಿಸಲಾಗುತ್ತಿದ್ದು, Data Science and Analytics and Artificial Intelligence & Machine Learning ಪದವಿ ಕೋರ್ಸ್ ಗಳಿಗೆ ಪ್ರವೇಶ ಪ್ರಕ್ರಿಯೆ ಶುರುವಾಗಿದ್ದು, ಪ್ರವೇಶ ಬಯಸುವ ವಿದ್ಯಾರ್ಥಿನಿಯರು ದ್ವಿತೀಯ ಪಿ.ಯು.ಸಿ ಪೂರ್ಣಗೊಳಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ 080 – 29555666, 22200044, 22200055 ಅಥವಾ ಡಾ. ಅಶೋಕ್.ಎಸ್.ಬಿ ಮೊಬೈಲ್ ಸಂ. 9164001006 ಕರೆ ಮಾಡಲು ಅಥವಾ ಇ- ಮೇಲ್ ವಿಳಾಸ mcublr@gmail.com ಅಥವಾ dr.ashoksbcs@gmail.com ಗೆ ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಚಿತ್ರಕಲಾ ಪರಿಷತ್ತಿನಲ್ಲಿ ಬೆಂಗಳೂರು ಉತ್ಸವಕ್ಕೆ ಚಾಲನೆ

**ಬೆಂಗಳೂರು ಆಗಸ್ಟ್ 06** (ಕರ್ನಾಟಕ ವಾರ್ತೆ)

ಕರೋನಾ ಲಾಕ್‌ಡೌನ್ ನಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿರುವವರಲ್ಲಿ ಕರಕುಶಲ ಕರ್ಮಿಗಳೂ ಒಬ್ಬರು. ಸರಿಯಾದ ಮಾರುಕಟ್ಟೆ ಇಲ್ಲದೆ ತೊಂದರೆಗೆ ಸಿಲುಕಿರುವ ಕುಶಲಕರ್ಮಿಗಳಿಗೆ ಉತ್ತಮ ವೇದಿಕೆಯನ್ನು ಒದಗಿಸುವ ಉದ್ದೇಶದಿಂದ **ಕರ್ನಾಟಕ ಚಿತ್ರಕಲಾ ಪರಿಷತ್ ಆವರಣದಲ್ಲಿ ಇಂದಿನಿಂದ 10 ದಿನಗಳ ಕಾಲ ಆಯೋಜಿಸಲಾಗಿರುವ ಬೆಂಗಳೂರು ಉತ್ಸವಕ್ಕೆ ಚಾಲನೆ ನೀಡಲಾಯಿತು.**

**ಬೆಂಗಳೂರು ಉತ್ಸವಕ್ಕೆ ಚಾಲನೆ ನೀಡಿದ ನಟಿ ಭೂಮಿ ಶೆಟ್ಟಿ ಮಾತನಾಡಿ, ಕರೋನಾ ಕಾಲದಲ್ಲಿ ಎಲ್ಲರಿಗೂ** ಸಂಕಷ್ಟ ಅನುಭವಿಸಿದ್ದಾರೆ. ಅದರಲ್ಲೂ ಕರಕುಶಲಕರ್ಮಿಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಇಲ್ಲದೆ ತೊಂದರೆಗೀಡಾಗಿದ್ದರು. ಅವರಿಗೆ ಮಾರುಕಟ್ಟೆಯ ಒದಗಿಸುವ ನಿಟ್ಟಿನಲ್ಲಿ ಕರ್ನಾಟಕ ಚಿತ್ರಕಲಾ ಪರಿಷತ್ತಿನ ಆವರಣದಲ್ಲಿ ಆಯೋಜಿಸಲಾಗಿರುವ ಬೆಂಗಳೂರು ಉತ್ಸವದಲ್ಲಿ ಪಾಲ್ಗೊಂಡು ದೇಶದ ಎಲ್ಲಾ ಭಾಗಗಳಿಂದ ಆಗಮಿಸಿರುವ ಕರಕುಶಲ ಕರ್ಮಿಗಳಿಗೆ ಪ್ರೋತ್ಸಾಹ ನೀಡಿಲು ಮನವಿ ಮಾಡಿದರು.

ಕರಕುಶಲ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ಮೇಳ ಆಗಸ್ಟ್ 15 ರ ವರೆಗೆ ಬೆಳಿಗ್ಗೆ 11 ರಿಂದ ಸಂಜೆ 7 ಗಂಟೆಯವರೆಗೆ ನಡೆಯಲಿದೆ. ಕರೋನಾ ಸಾಂಕ್ರಾಮಿಕ ಹರಡದಂತೆ ಎಲ್ಲಾ ರೀತಿಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

**ಕಾರ್ಯಕ್ರಮದಲ್ಲಿ ಕರ್ನಾಟಕ ಚಿತ್ರಕಲಾ ಪರಿಷತ್ತಿನ ಅಧ್ಯಕ್ಷರಾದ ಡಾ. ಬಿ.ಎಲ್ ಶಂಕರ್, ಕರ್ನಾಟಕ ಚಿತ್ರಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿಗಳಾದ ಪ್ರೊ. ಕೆ.ಎಸ್ ಅಪ್ಪಾಜಯ್ಯ ಪಾಲ್ಗೊಂಡಿದ್ದರು.**

Photo Caption: ಮುಂಬರುವ ವರಮಹಾಲಕ್ಷ್ಮಿ ಹಾಗೂ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಹಾಗೂ ಕರೋನಾ ಲಾಕ್‍ಡೌನ್ ನಿಂದ ಸಂಕಷ್ಟಕ್ಕೆ ಒಳಗಾಗಿರುವ ಕರಕುಶಲಕರ್ಮಿಗಳಿಗೆ ಉತ್ತಮ ಮಾರುಕಟ್ಟೆಯನ್ನು ಒದಗಿಸುವ ಉದ್ದೇಶದಿಂದ ಕರ್ನಾಟಕ ಚಿತ್ರಕಲಾ ಪರಿಷತ್ತಿನಲ್ಲಿ ಆಯೋಜಿಸಲಾಗಿರುವ ಬೆಂಗಳೂರು ಉತ್ಸವ ಕರಕುಶಲ ಪ್ರದರ್ಶನ ಹಾಗೂ ಮಾರಾಟ ಮೇಳದ ಉದ್ಘಾಟನಾ ಕಾರ್ಯಕ್ರಮದಲ್ಲಿ ಕರ್ನಾಟಕ ಚಿತ್ರಕಲಾ ಪರಿಷತ್ತಿನ ಅಧ್ಯಕ್ಷರಾದ ಡಾ. ಬಿ.ಎಲ್. ಶಂಕರ್, ಕರ್ನಾಟಕ ಚಿತ್ರಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿಗಳಾದ ಪ್ರೊ. ಕೆ.ಎಸ್ ಅಪ್ಪಾಜಯ್ಯ, ನಟಿ ಭೂಮಿ ಶೆಟ್ಟಿ ಪಾಲ್ಗೊಂಡಿದ್ದರು.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 06 (ಕರ್ನಾಟಕ ವಾರ್ತೆ) :

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 6.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 36 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 35 | ಉತ್ತಮ | $PM_{10}$, $NO_2$ |
| 3 | ಕವಿಕ, ಮೈಸೂರುರಸ್ತೆ | 68 | ತೃಪ್ತಿಕರ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೇಗೌಡನಗರ | 36 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 51 | ತೃಪ್ತಿಕರ | CO, $NO_2$ |

| | | | | |
|---|---|---|---|---|
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 55 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 49 | ಉತ್ತಮ | $PM_{10}$ |
| **(6.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 168 | ಸಾಧಾರಣ | CO |
| 9 | ಪೀಣ್ಯ | 54 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | 63 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 6.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 36 | Good | $PM_{10}$ |
| 2 | Jayanagar 5th Block, Shalini ground | 35 | Good | $PM_{10}$, $NO_2$ |
| 3 | KAVIKA, Mysore Road | 68 | Satisfactory | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 36 | Good | $PM_{10}$ |
| 5 | HSR Layout, near Central Silkboard | 51 | Satisfactory | CO, $NO_2$ |
| 6 | City Railway Station, | 55 | Satisfactory | $PM_{10}$ |

| | | | | |
|---|---|---|---|---|
| | Magestic, Bengaluru | | | |
| 7 | Saneguruvanahalli, NisargaBhavan, KSPCB, Shivanagara | 49 | Good | $PM_{10}$ |
| **(6.8.2021 at 11.05 AM)** | | | | |
| 8 | BWSSB, Kadabesanahalli | 168 | Moderate | CO |
| 9 | Peenya | 54 | Satisfactory | $PM_{10}$ |
| 10 | BTM Layout | 63 | Satisfactory | CO |

* Data not available

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |